# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 655 |
| **ಸದಸ್ಯರ ಹೆಸರು** | : | ಶ್ರೀ ಕೆ.ಪ್ರತಾಪ್ ಸಿಂಹ ನಾಯಕ್ ಕೆ.<br>(ವಿಧಾನಸಭೆಯಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ** | : | 13.12.2024. |
| **ಉತ್ತರಿಸುವವರು** | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಕಳಪೆ ಗುಣಮಟ್ಟದ ಪೌಷ್ಠಿಕ ಆಹಾರ ಪೂರೈಕೆ ಆಗುತ್ತಿರುವುದರ ವಿರುದ್ಧ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ಬೃಹತ್ ಪ್ರತಿಭಟನೆ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಕಳಪೆ ಗುಣಮಟ್ಟದ ಪೌಷ್ಠಿಕ ಆಹಾರ ಪೂರೈಕೆ ಆಗುತ್ತಿರುವುದರ ವಿರುದ್ಧ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ಬೃಹತ್ ಪ್ರತಿಭಟನೆ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಆ. | ಬಂದಿದ್ದಲ್ಲಿ, ಈ ರೀತಿ ಅಂಗನವಾಡಿ ಕೇಂದ್ರಗಳಿಗೆ ಕಳಪೆ ಗುಣಮಟ್ಟದ ಪೌಷ್ಠಿಕ ಆಹಾರ ಪೂರೈಕೆ ಆಗಲು ಕಾರಣಗಳೇನು; ಈ ಕುರಿತು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು; | ಅನ್ವಯಿಸುವುದಿಲ್ಲ. |
| ಇ. | ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ನಿಯಮಾವಳಿ ಅನುಸಾರ ಸ್ಥಳಿಯವಾಗಿ ದೊರಕುವ ಪೌಷ್ಠಿಕ ಆಹಾರ ನೀಡುವ ನಿಯಮ ಇದ್ದರೂ ಅದನ್ನು ಸಂಪೂರ್ಣವಾಗಿ ಉಲ್ಲಂಘನೆ ಮಾಡಲು ಕಾರಣಗಳೇನು; | ಮಾನ್ಯ ಸರ್ವೋಚ್ಚ ಮತ್ತು ಉಚ್ಚ ನ್ಯಾಯಾಲಯದ ಆದೇಶದ ಅನುಷ್ಠಾನದ ಹಿನ್ನಲೆಯಲ್ಲಿ ಹಾಗೂ ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ಮೈಕ್ರೋ ನ್ಯೂಟ್ರಿಯೆಂಟ್ಸ್ ಒಳಗೊಂಡಂತೆ ಪೂರಕ ಪೌಷ್ಠಿಕ ಆಹಾರದ ಮೆನುವನ್ನು Defence Food Research Laboratories (DFRL) ರವರಿಂದ ಅನುಮೋದನೆ ಪಡೆದು ಅಂಗನವಾಡಿ ಕೇಂದ್ರದ ಫಲಾನುಭವಿಗಳಿಗೆ ವಿತರಿಸಲಾಗುತ್ತಿದೆ.<br><br>ಅಂಗನವಾಡಿ ಫಲಾನುಭವಿಗಳ ಪ್ರಾದೇಶಿಕ ಅಭಿರುಚಿಗೆ ಅನುಗುಣವಾಗಿ ಅನುಮೋದಿತ ಮೆನುವಿನಂತೆ ಪೂರಕ ಪೌಷ್ಠಿಕ ಆಹಾರ ತಯಾರಿಸಲು ಸ್ಥಳೀಯವಾಗಿ ಲಭ್ಯವಿರುವ ಕಚ್ಚಾ ಆಹಾರ ಪದಾರ್ಥಗಳನ್ನು ಬಳಸಲಾಗುತ್ತಿದೆ. |
| ಈ. | ಆಹಾರ ಸರಬರಾಜು ಟೆಂಡರ್ ಪಡೆದಿರುವ ಗುತ್ತಿಗೆದಾರರು ಅವ್ಯವಹಾರ ನಡೆಸುತ್ತಿರುವ ಕುರಿತು | ಮಾನ್ಯ ಸರ್ವೋಚ್ಚ ನ್ಯಾಯಾಲಯದ ದಿನಾಂಕ: 07.10.2004ರ ಆದೇಶದಲ್ಲಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಅಂಗನವಾಡಿಗಳಲ್ಲಿನ ಆಹಾರ ಸರಬರಾಜಿಗೆ ಗುತ್ತಿಗೆದಾರರನ್ನು |

| | | |
|---|---|---|
| | ಪದೇ ಪದೇ ಕೇಳಿ ಬರುತ್ತಿರುವ ದೂರಿನ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಬಳಸಬಾರದೆಂದು ಮತ್ತು ಆಹಾರ ಸಾಮಗ್ರಿಗಳನ್ನು ಖರೀದಿಸಲು, ಪೌಷ್ಠಿಕ ಆಹಾರ ಸಿದ್ದಪಡಿಸಲು ಗ್ರಾಮ ಸಮುದಾಯ, ಸ್ವಸಹಾಯ ಗುಂಪುಗಳು ಮತ್ತು ಮಹಿಳಾ ಮಂಡಳಿಗಳನ್ನು ಬಳಸಿಕೊಂಡು ಐ.ಸಿ.ಡಿ.ಎಸ್. ಅನುದಾನವನ್ನು ಉಪಯೋಗಿಸಿಕೊಳ್ಳಲು ಆದೇಶ ನೀಡಿರುತ್ತದೆ. ಸದರಿ ಆದೇಶದನ್ವಯ ಎಂ.ಎಸ್.ಪಿ.ಸಿ.ಗಳನ್ನು ಸ್ಥಾಪಿಸಿ ಅಂಗನವಾಡಿ ಕೇಂದ್ರಗಳಿಗೆ ಪೂರಕ ಪೌಷ್ಠಿಕ ಆಹಾರವನ್ನು ಸರಬರಾಜು ಮಾಡಲಾಗುತ್ತಿದೆ. ಇದಕ್ಕೆ ಬೇಕಾದ ಅಕ್ಕಿ ಮತ್ತು ಗೋಧಿಯನ್ನು Food Corporation of India (FCI) ನಿಂದ ಖರೀದಿಸಲಾಗುತ್ತಿದೆ. ಉಳಿದ ಕಚ್ಚಾ ಆಹಾರ ಪದಾರ್ಥಗಳನ್ನು ಎಂ.ಎಸ್.ಪಿ.ಸಿ.ಗಳು ಸ್ಥಳೀಯವಾಗಿ ಖರೀದಿ ಮಾಡುತ್ತಿದ್ದು, ಈ ಕುರಿತು ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ. |

**ಸಂಖ್ಯೆ:** ಮಮಇ 301 ಐಸಿಡಿ 2024

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು